ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಬಿ.ಎಸ್. ಯಡಿಯೂರಪ್ಪ(ಉಪ ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, "2006ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು:ವಿಧೇಯಕವನ್ನು ಮಂಡಿಸಲಾಗಿದೆ.

ಅನುಬಂಧ-1

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ಧನವಿನಿಯೋಗ ವಿಧೇಯಕ, 2006

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, "2006ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, ಒಟ್ಟು 1638.82 ಕೋಟಿ ರೂಪಾಯಿಗಳ ಪೂರಕ ಅಂದಾಜುಗಳನ್ನು ರಾಜ್ಯ ವಿಧಾನ ಮಂಡಲದ ಮುಂ ಮಂಡಿಸಲಾಗುತ್ತಿದೆ. 1638.82 ಕೋಟಿ ರೂಪಾಯಿಗಳಲ್ಲಿ 481.34 ಕೋಟಿ ರೂಪಾಯಿಗಳಷ್ಟು ಹ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಬಂದಿದೆ. ಪೂರಕ ಅಂದಾಜುಗಳಲ್ಲಿ ಕೋರಲಾಗಿರುವ ಪ್ರಸ್ತಾವನೆಯಲ್ಲಿ ಕೆಲವು ಮುಖ್ಯವಾದ ಪ್ರಸ್ತಾವನೆಗಳು ಹೀಗಿವೆ. ಕೃಷಿ ಮತ್ತು ತೋಟಗಾರಿಕೆ ಇಲಾಖೆ ಬೇಡಿಕೆಯಲ್ಲಿ ಕೇಂದ್ರ ಸರ್ಕಾರ ಕೃಷಿ ಯಾಂತ್ರೀಕರಣ ಯೋಜನೆಯಲ್ಲಿ ಹೆಚ್ಚುವರಿಯಾಗಿ 10.98 ಕೋಟಿ ರೂಪಾಯಿಗಳಷ್ಟು ಹಣವನ್ನು ಒದಗಿಸಿರುತ್ತಾರೆ. ಈ ಹಣವನ್ನು ಕೃಷಿ ಮತ್ತು ತೋಟಗಾರಿಕೆ ಇಲಾಖೆಗೆ ಬಿಡುಗಡೆ ಮಾಡುವ ಪ್ರಸ್ತಾವವನ್ನು ಮಂಡಿಸಲಾಗಿದೆ. ಬೇಡಿಕೆ ಸಂಖ್ಯೆ: 5 ರಲ್ಲಿ ಗೃಹ ಇಲಾಖೆಗೆ ಸಂಬಂಧಪಟ್ಟಂತೆ ಹೇಳುವುದಾದರೆ, ವೀರಪ್ಪನ್ ಅನ್ನು ಕೊಂದ S.T.F. ಅಧಿಕಾರಿಗಳಿಗೆ ಬಹುಮಾನವನ್ನು ಕೊಡಲು 6 ಕೋಟಿ ರೂಪಾಯಿಗಳನ್ನು ಒದಗಿಸಲಾಗಿದೆ. ಇದಲ್ಲದೆ ಜಿಲ್ಲಾ ಪಂಚಾಯತ್ ಚುನಾವಣೆಯಲ್ಲಿ ಯಾವುದೇ ಕಾನೂನಿನ ತೊಂದರೆಯಿಲ್ಲದೆ ಸುಗಮವಾಗಿ ನಡೆಸಿದ ಪೊಲೀಸ್ ಇಲಾಖೆಗೆ 9.95 ಕೋಟಿ ರೂಪಾಯಿಗಳನ್ನು ನೀಡಲು ಪ್ರಸ್ತಾವನೆಯನ್ನು ಮಂಡಿಸಲಾಗಿದೆ. ಇದರಲ್ಲಿ bus fare ಹೋಂಗಾರ್ಡ್ಸ್ ಮತ್ತು ಬ್ಯಾರೇಜ್ ಎಕ್ಸ್‌ಪ್ರೆಸ್ ಸಲುವಾಗಿ . . .

(ಮಾನ್ಯ ವಿರೋಧ ಪಕ್ಷದ ನಾಯಕರಾದಿಯಾಗಿ ಕಾಂಗ್ರೆಸ್ ಪಕ್ಷದ ಸದಸ್ಯರು ಮತ್ತು ವಾಟಾಳ್ ಪಕ್ಷದ ಮಾನ್ಯ ವಾಟಾಳ್ ನಾಗರಾಜ್ ಹಾಗೂ ಮಾನ್ಯ ಜಯಪ್ರಕಾಶ್ ಹೆಗ್ಡೆಯವರು ಸದನದ ಬಾವಿಗೆ ಬಂದು ಧರಣಿ ನಿರತರಾಗಿ ಘೋಷಣೆ ಕೂಗುತ್ತಿದ್ದರು.)

(ಗೊಂದಲ)

ಬೇಡಿಕೆ ಸಂಖ್ಯೆ: 7ರಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಗೆ ಕೇಂದ್ರ ಸರ್ಕಾರದಿಂದ M.N.P. ಕಾರ್ಯಕ್ರಮದಡಿ ಹೆಚ್ಚುವರಿಯಾದ ಹಣವನ್ನು ಪಡೆಯಲಿರುವುದರಿಂದ ರಾಜ್ಯ ಸರ್ಕಾರದ ಪರವಾಗಿ 86.47 ಕೋಟಿ ರೂಪಾಯಿಗಳನ್ನು ಕುಡಿಯುವ ನೀರಿಗಾಗಿ ನೀಡಲಾಗುತ್ತಿ ಕೇಂದ್ರ ಸರ್ಕಾರದ ತ್ವರಿತ ನೀರು ಸರಬರಾಜು ಯೋಜನೆಯಲ್ಲಿ ರಾಜ್ಯಸರ್ಕಾರದ ಭಾರತ ನಿರ್ಮಾ ಯೋಜನೆಯ ಹಣ ಬಂದಿರುವುದರಿಂದ 199.27 ಕೋಟಿ ರೂಪಾಯಿಗಳನ್ನು ನೀಡಬೇಕಾಗುತ್ತದೆ.

ಇದಲ್ಲದೆ ಸ್ವಚ್ಛ ಗ್ರಾಮ ಯೋಜನೆಯಡಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಸರ್ಕಾರ ಖಾತರಿ ನೀಡುವ ಬದಲು ಆಯವ್ಯಯದ ಮುಖೇನ 40 ಕೋಟಿ ರೂಪಾಯಿಗಳನ್ನು ನೀಡಲಾಗಿದೆ. ಬೇಡಿಕೆ ಸಂಖ್ಯೆ 9ರಲ್ಲಿ ಸಹಕಾರ ಇಲಾಖೆಗೆ ಸಂಬಂಧಿಸಿದ ನಬಾರ್ಡ್ ಸಹಯೋಗದಿಂದ R.I.D.F. ಯೋಜನೆಯಲ್ಲಿ ಗ್ರಾಮೀಣ ಪ್ರದೇಶದಲ್ಲಿ ಮಾರುಕಟ್ಟೆಗಳನ್ನು ನಿರ್ಮಿಸಲು 6.11 ಕೋಟಿ ರೂಪಾಯಿಗಳು ಬಂದಿದ್ದು ಅದನ್ನು ಬಿಡುಗಡೆ ಮಾಡಲಾಗುತ್ತಿದೆ. ಈ ಎಲ್ಲಾ ಕಾರಣಕ್ಕಾಗಿ ನಾನು ಬೇಡಿಕೆಯನ್ನು ಮಂಡಿಸುತ್ತಿದ್ದೇನೆ. ತಾವು ಇದಕ್ಕೆ ಅನುಮತಿ ಕೊಡಬೇಕೆಂದು ನಾನು ವಿನಂತಿ ಮಾಡಿಕೊಳ್ಳುತ್ತೇನೆ. ಈಗ ಇದನ್ನು ನಾನು ಮಂಡಿಸಿದ್ದೇನೆ.

(ಗೊಂದಲ)

ಅಧ್ಯಕ್ಷರು: ದಯಮಾಡಿ ನಿಮ್ಮ ನಿಮ್ಮ ಆಸನಗಳಿಗೆ ಹೋಗಿ. ಈಗ ಅವರು ಧನವಿನಿಯೋಗ ಮಸೂದೆಯನ್ನು ಮಂಡನೆ ಮಾಡಿದ್ದಾರೆ. ತಾವೆಲ್ಲಾ ಅದರಲ್ಲಿ ಭಾಗವಹಿಸಿರಿ. ಅದು ಬಿಟ್ಟು ವೆಲ್‌ಗೆ ಬಂದುಬಿಟ್ಟು ನೀವೆಲ್ಲಾ ಬಾಯಿಗೆ ಬಂದ ರೀತಿಯಲ್ಲಿ ಘೋಷಣೆ ಕೂಗಿಕೊಂಡರೆ ಏನಿದು? ನಾನು ನಿಮಗೆ ಒಂದೇ ಒಂದು ಮಾತನ್ನು ಹೇಳುತ್ತೇನೆ. ನೀವು 30–35 ವರ್ಷ ಈ ಸಭೆಯ ಸದಸ್ಯರಾಗಿದ್ದೀರಿ. ನಾಲ್ಕು ಸಾರಿ ಐದು ಸಾರಿ ಬಂದವರಿದ್ದೀರಿ. ಈ ರೀತಿ ನೀವು ನಡವಳಿಕೆ ಮಾಡುತ್ತಿರುವುದು ಸರಿ ಎಂದು ನೀವು ಆತ್ಮಾವಲೋಕನ ಮಾಡಿಕೊಳ್ಳಿ. ಈಗ ಜನ ನೋಡುತ್ತಿದ್ದಾರೆ. ದಯವಿಟ್ಟು ಬಾಯಿಗೆ ಬಂದಂತೆ ಮಾತನಾಡುವುದಾದರೆ ಇದು ವಿಧಾನಸಭೆ ಆಗುವುದಿಲ್ಲ. ದಯಮಾಡಿ ನಿಮ್ಮಲ್ಲಿ ಮನವಿ ಮಾಡಿಕೊಳ್ಳುತ್ತೇನೆ. ನಿಮ್ಮ ನಿಮ್ಮ ಆಸನಗಳಿಗೆ ಹೋಗಿ. ಇವರು ಮಸೂದೆ ಮಂಡನೆ ಮಾಡಿದ್ದಾರೆ. ಅದರ ಬಗ್ಗೆ ಚರ್ಚೆ ನಡೆಯುತ್ತಿದೆ. ಚರ್ಚೆಯಲ್ಲಿ ಭಾಗವಹಿಸಿ.

(ಗೊಂದಲ)

(ಬಾವಿಯಿಂದ ಕಾಂಗ್ರೆಸ್ ಸದಸ್ಯರು ಘೋಷಣೆಗಳನ್ನು ಕೂಗುತ್ತಿದ್ದರು.)

ಶ್ರೀ ಬಿ.ಎಸ್. ಯಡಿಯೂರಪ್ಪ: ಮಾನ್ಯ ಅಧ್ಯಕ್ಷರೆ, ವಿಧೇಯಕವನ್ನು ಅಂಗೀಕರಿಸಬೇಕೆಂದು ನಾನು ಸೂಚಿಸುತ್ತಿದ್ದೇನೆ.

(ಗೊಂದಲ)

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"2006ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸುವುದು" ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಹಾಗೂ 3

ಪ್ರಸ್ತಾವ ಏನೆಂದರೆ:–

ಅಧ್ಯಕ್ಷರು: "ಖಂಡ 2 ಹಾಗೂ 3, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಹಾಗೂ 3, ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು.)

ಪ್ರಸ್ತಾವದ ಅಂಗೀಕಾರ

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, "2006ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

" 2006ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಅಂಗೀಕರಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

(ಬಾವಿಯಿಂದ ಕಾಂಗ್ರೆಸ್ ಸದಸ್ಯರು ಘೋಷಣೆಗಳನ್ನು ಕೂಗುತ್ತಿದ್ದರು.)

(ಗೊಂದಲ)

ಅಧ್ಯಕ್ಷರು: ಈಗ ಸದನವನ್ನು ನಾಳೆ ಬೆಳಗ್ಗೆ 10–00 ಗಂಟೆವರೆಗೆ ಮುಂದೂಡುತ್ತಿದ್ದೇನೆ.

(ಸದನವು ಮಧ್ಯಾಹ್ನ 3 ಗಂಟೆ 19 ನಿಮಿಷಕ್ಕೆ ಮುಂದೂಡಲ್ಪಟ್ಟು ಪುನಃ ದಿನಾಂಕ: 3ನೇ ಮಾರ್ಚ್ 2006ರ ಶುಕ್ರವಾರದಂದು ಬೆಳಗ್ಗೆ 10–00 ಗಂಟೆಗೆ ಸೇರಲು ನಿಶ್ಚಯಿಸಿತು)

ಅನುಬಂಧ–1

ಕರ್ನಾಟಕ ಧನವಿನಿಯೋಗ ವಿಧೇಯಕ, 2006

(2006ರ ವಿಧಾನಸಭೆಯ ವಿಧೇಯಕ ಸಂಖ್ಯೆ 2)

2005–06ನೇ ಹಣಕಾಸು ವರ್ಷದ ಸೇವೆಗಳಿಗಾಗಿ ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ ಮತ್ತು ಅದರೊಳಗಿಂದ ಕೆಲವು ಅಧಿಕ ಮೊತ್ತಗಳ ಸಂದಾಯ ಮತ್ತು ವಿನಿಯೋಗಕ್ಕಾಗಿ ಅಧಿಕಾರ ನೀಡಲು ಒಂದು ವಿಧೇಯಕ.

2005–06ನೇ ಹಣಕಾಸು ವರ್ಷದ ಸೇವೆಗಳಿಗಾಗಿ ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ ಮತ್ತು ಆ ಪೈಕಿಯಿಂದ ಕೆಲವು ಮೊತ್ತಗಳ ಸಂದಾಯ ಮತ್ತು ವಿನಿಯೋಗಕ್ಕಾಗಿ ಅಧಿಕಾರ ನೀಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಐವತ್ತೇಳನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಕೆಳಕಂಡಂತೆ ಅಧಿನಿಯಮಿತವಾಗಲಿ,

1. ಸಂಕ್ಷಿಪ್ತ ಹೆಸರು: ಈ ಅಧಿನಿಯಮವನ್ನು ಕರ್ನಾಟಕ ಧನವಿನಿಯೋಗ ಅಧಿನಿಯಮ 2006 ಎಂದು ಕರೆಯತಕ್ಕದ್ದು.